ಸೃಜನಿ

SRUJANI: Indian Journal of Innovative Research and Development (SIJIRD)
Volume-5 Issue 3, July-August 2026, Pp. 69-74
Bi-Monthly, Peer-Reviewed, Open Access, Indexed Journal

I S S N: 2583-3510
SIRDF
JOURNALS
editor@srujani.in
www.srujani.in

# ಗ್ರಾಮೀಣ ಜನರ ಸೇವೆಗಾಗಿ ಗ್ರಾಮ ಒನ್ ಯೋಜನೆಯ ಒಂದು ಅವಲೋಕನ

**ಡಾ. ಬಸವರಾಜ ಬಿ.ಕೆ**
ಸಹ ಪ್ರಾಧ್ಯಾಪಕರು, ರಾಜ್ಯಶಾಸ್ತ್ರ ವಿಭಾಗ, ಸರ್ಕಾರಿ ಕಲಾ ಕಾಲೇಜು (ಸ್ವಾಯತ್ತ), ಚಿತ್ರದುರ್ಗ.

***Abstract:***
*ಈ ಅಧ್ಯಯನವು ಗ್ರಾಮ ಒನ್ ಯೋಜನೆಯ ಉದ್ದೇಶಗಳು, ಕಾರ್ಯವೈಖರಿ ಹಾಗೂ ಗ್ರಾಮೀಣ ಜನರ ಜೀವನದ ಮೇಲೆ ಬೀರಿರುವ ಪರಿಣಾಮವನ್ನು ಅವಲೋಕನಾತ್ಮಕವಾಗಿ ವಿಶ್ಲೇಷಿಸುತ್ತದೆ. ಯೋಜನೆಯು ಸರ್ಕಾರಿ ಸೇವೆಗಳ ಪ್ರವೇಶ, ಸಮಯ ಮತ್ತು ವೆಚ್ಚದ ಉಳಿತಾಯ ಹಾಗೂ ಡಿಜಿಟಲ್ ಆಡಳಿತದ ವಿಸ್ತರಣೆಯಲ್ಲಿ ವಹಿಸಿರುವ ಪಾತ್ರವನ್ನು ಪರಿಶೀಲಿಸಲಾಗಿದೆ. ಜೊತೆಗೆ, ಯೋಜನೆಯ ಅನುಷ್ಠಾನದ ಸಂದರ್ಭದಲ್ಲಿ ಎದುರಾಗುವ ಸವಾಲುಗಳು ಮತ್ತು ಅವುಗಳ ಪರಿಹಾರದ ಸಾಧ್ಯತೆಗಳನ್ನು ಚರ್ಚಿಸಲಾಗಿದೆ. ಗ್ರಾಮೀಣ ಜನರಲ್ಲಿ ಡಿಜಿಟಲ್ ಸಾಕ್ಷರತೆ ಮತ್ತು ಸಾರ್ವಜನಿಕ ಸೇವೆಗಳ ಮೇಲಿನ ವಿಶ್ವಾಸವನ್ನು ಹೆಚ್ಚಿಸುವಲ್ಲಿ ಈ ಯೋಜನೆಯ ಮಹತ್ವವನ್ನು ಅಧ್ಯಯನವು ಒತ್ತಿಹೇಳುತ್ತದೆ. ಪರಿಣಾಮಕಾರಿ ಅನುಷ್ಠಾನ ಮತ್ತು ನಿರಂತರ ಸುಧಾರಣೆಯ ಮೂಲಕ ಗ್ರಾಮ ಒನ್ ಯೋಜನೆಯು ಗ್ರಾಮೀಣ ಅಭಿವೃದ್ಧಿ ಮತ್ತು ಉತ್ತಮ ಆಡಳಿತಕ್ಕೆ ಮಹತ್ವದ ಕೊಡುಗೆ ನೀಡಬಲ್ಲದು ಎಂಬುದನ್ನು ಈ ಸಂಶೋಧನೆ ಪ್ರತಿಪಾದಿಸುತ್ತದೆ.*

**Keywords:** *ಗ್ರಾಮ ಒನ್ ಯೋಜನೆ, ಗ್ರಾಮೀಣ ಸೇವೆಗಳು, ಡಿಜಿಟಲ್ ಆಡಳಿತ, ಸಾರ್ವಜನಿಕ ಸೇವಾ ವಿತರಣೆ, ಗ್ರಾಮೀಣ ಅಭಿವೃದ್ಧಿ.*

## ಪೀಠಿಕೆ

ಗ್ರಾಮೀಣ ಜನರಿಗೆ ಸರ್ಕಾರದ ವಿವಿಧ ಸೇವೆಗಳನ್ನು ಒಂದೇ ವೇದಿಕೆಯ ಮೂಲಕ ಸುಲಭವಾಗಿ, ಪಾರದರ್ಶಕವಾಗಿ ಹಾಗೂ ಸಮಯೋಚಿತವಾಗಿ ಒದಗಿಸುವ ಉದ್ದೇಶದಿಂದ ಕರ್ನಾಟಕ ಸರ್ಕಾರವು ಗ್ರಾಮ ಒನ್ ಯೋಜನೆಯನ್ನು ಜಾರಿಗೊಳಿಸಿದೆ. ಈ ಯೋಜನೆಯು ಗ್ರಾಮೀಣ ಪ್ರದೇಶದ ನಾಗರಿಕರಿಗೆ ವಿವಿಧ ಇಲಾಖೆಗಳ ಸೇವೆಗಳನ್ನು ಅವರ ಗ್ರಾಮದಲ್ಲಿಯೇ ಲಭ್ಯವಾಗುವಂತೆ ಮಾಡುವ ಮೂಲಕ ಆಡಳಿತವನ್ನು ಜನಸ್ನೇಹಿಯಾಗಿಸಿದೆ.

ಗ್ರಾಮೀಣ ಪ್ರದೇಶದ ಜನರಿಗೆ ಸರ್ಕಾರಿ ಸೇವೆಗಳನ್ನು ತ್ವರಿತವಾಗಿ, ಪಾರದರ್ಶಕವಾಗಿ ಹಾಗೂ ಸುಲಭವಾಗಿ ಒದಗಿಸುವುದು ಉತ್ತಮ ಆಡಳಿತದ ಪ್ರಮುಖ ಗುರಿಯಾಗಿದೆ. ಈ ಉದ್ದೇಶವನ್ನು ಸಾಧಿಸುವ ನಿಟ್ಟಿನಲ್ಲಿ ಕರ್ನಾಟಕ ಸರ್ಕಾರವು ಗ್ರಾಮ ಒನ್ (Grama One) ಯೋಜನೆಯನ್ನು ಜಾರಿಗೆ ತಂದಿದೆ. ಈ ಯೋಜನೆಯ ಮೂಲಕ ವಿವಿಧ ಸರ್ಕಾರಿ ಇಲಾಖೆಗಳ ಸೇವೆಗಳನ್ನು ಒಂದೇ ಕೇಂದ್ರದಲ್ಲಿ ಒದಗಿಸಿ, ಗ್ರಾಮೀಣ ನಾಗರಿಕರು ತಮ್ಮ ಗ್ರಾಮದಲ್ಲಿಯೇ ಅಗತ್ಯ ಪ್ರಮಾಣಪತ್ರಗಳು, ಅರ್ಜಿಗಳು, ಪಾವತಿಗಳು ಹಾಗೂ ಇತರ ಸರ್ಕಾರಿ

***Please cite this article as:*** ಬಸವರಾಜ, ಬಿ.ಕೆ. (2026). ಗ್ರಾಮೀಣ ಜನರ ಸೇವೆಗಾಗಿ ಗ್ರಾಮ ಒನ್ ಯೋಜನೆಯ ಒಂದು ಅವಲೋಕನ. *ಸೃಜನಿ: ಇಂಡಿಯನ್ ಜರ್ನಲ್ ಆಫ್ ಇನ್ನೋವೇಟಿವ್ ರೀಸರ್ಚ್ ಅಂಡ್ ಡೆವಲಪ್‌ಮೆಂಟ್,* 5(3), 69–74

ಸೇವೆಗಳನ್ನು ಪಡೆಯುವ ಅವಕಾಶ ಕಲ್ಪಿಸಲಾಗಿದೆ. ಇದರಿಂದ ಸಾರ್ವಜನಿಕ ಸೇವೆಗಳಿಗಾಗಿ ತಾಲ್ಲೂಕು ಅಥವಾ ಜಿಲ್ಲಾ ಕೇಂದ್ರಗಳಿಗೆ ಪದೇ ಪದೇ ತೆರಳುವ ಅಗತ್ಯ ಕಡಿಮೆಯಾಗಿದ್ದು, ಸಮಯ ಮತ್ತು ವೆಚ್ಚದ ಉಳಿತಾಯವಾಗುತ್ತಿದೆ.

ಗ್ರಾಮ ಒನ್ ಯೋಜನೆಯು ಡಿಜಿಟಲ್ ಆಡಳಿತ (Digital Governance) ಪರಿಕಲ್ಪನೆಯನ್ನು ಗ್ರಾಮೀಣ ಮಟ್ಟಕ್ಕೆ ವಿಸ್ತರಿಸುವ ಮಹತ್ವದ ಹೆಜ್ಜೆಯಾಗಿದೆ. ಈ ಯೋಜನೆಯು ತಂತ್ರಜ್ಞಾನವನ್ನು ಪರಿಣಾಮಕಾರಿಯಾಗಿ ಬಳಸಿಕೊಂಡು ಸರ್ಕಾರ ಮತ್ತು ನಾಗರಿಕರ ನಡುವಿನ ಅಂತರವನ್ನು ಕಡಿಮೆ ಮಾಡುವುದರ ಜೊತೆಗೆ, ಸೇವಾ ವಿತರಣೆಯಲ್ಲಿ ಪಾರದರ್ಶಕತೆ, ಉತ್ತರದಾಯಿತ್ವ ಹಾಗೂ ಕಾರ್ಯಕ್ಷಮತೆಯನ್ನು ಹೆಚ್ಚಿಸಿದೆ. ಗ್ರಾಮೀಣ ಜನರಲ್ಲಿ ಡಿಜಿಟಲ್ ಸಾಕ್ಷರತೆಯನ್ನು ವೃದ್ಧಿಸುವುದರೊಂದಿಗೆ, ಸರ್ಕಾರಿ ಸೇವೆಗಳ ಬಗ್ಗೆ ಅರಿವು ಮತ್ತು ವಿಶ್ವಾಸವನ್ನು ಬೆಳೆಸುವಲ್ಲಿಯೂ ಈ ಯೋಜನೆ ಮಹತ್ವದ ಪಾತ್ರ ವಹಿಸುತ್ತಿದೆ.

ಪ್ರಸ್ತುತ ಅಧ್ಯಯನವು ಗ್ರಾಮ ಒನ್ ಯೋಜನೆಯ ಉದ್ದೇಶಗಳು, ಕಾರ್ಯವೈಖರಿ, ಗ್ರಾಮೀಣ ಜನರಿಗೆ ದೊರೆಯುತ್ತಿರುವ ಸೇವೆಗಳ ಸ್ವರೂಪ ಹಾಗೂ ಯೋಜನೆಯ ಸಾಮಾಜಿಕ ಮತ್ತು ಆಡಳಿತಾತ್ಮಕ ಪರಿಣಾಮಗಳನ್ನು ಅವಲೋಕನಾತ್ಮಕ ವಾಗಿ ವಿಶ್ಲೇಷಿಸುತ್ತದೆ. ಜೊತೆಗೆ, ಯೋಜನೆಯ ಅನುಷ್ಠಾನದಲ್ಲಿ ಎದುರಾಗುತ್ತಿರುವ ಸವಾಲುಗಳು ಹಾಗೂ ಅದರ ಪರಿಣಾಮಕಾರಿತ್ವವನ್ನು ಮತ್ತಷ್ಟು ಹೆಚ್ಚಿಸಲು ಕೈಗೊಳ್ಳಬಹುದಾದ ಕ್ರಮಗಳ ಕುರಿತು ಚರ್ಚಿಸುತ್ತದೆ. ಗ್ರಾಮೀಣ ಅಭಿವೃದ್ಧಿ ಮತ್ತು ಉತ್ತಮ ಆಡಳಿತದ ದೃಷ್ಟಿಯಿಂದ ಗ್ರಾಮ ಒನ್ ಯೋಜನೆಯ ಮಹತ್ವವನ್ನು ಈ ಅಧ್ಯಯನವು ಸಮಗ್ರವಾಗಿ ಬೆಳಕು ಚೆಲ್ಲುತ್ತದೆ

ಸರ್ಕಾರದ ಈ ಮಹತ್ವಕಾಂಕ್ಷಿ "ಗ್ರಾಮ ಒನ್" ಯೋಜನೆಯನ್ನು ಜನವರಿ 26 ರಂದು ಮುಖ್ಯ ಮಂತ್ರಿಯವರು ಚಾಲನೆ ನೀಡಿದರು. ಮೊದಲ ಹಂತದಲ್ಲಿ 12 ಜಿಲ್ಲೆಗಳ 3026 ಗ್ರಾಮ ಪಂಚಾಯಿತಿಗಳಲ್ಲಿ ಗ್ರಾಮ ಒನ್ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಫೆಬ್ರವರಿ ಅಂತ್ಯದೊಳಗೆ ಉಳಿದ ಎಲ್ಲಾ ಜಿಲ್ಲೆಗಳ ಗ್ರಾಮ ಪಂಚಾಯಿತಿಗಳಲ್ಲಿ ಕೇಂದ್ರಗಳನ್ನು ತೆರೆಯಲು ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಮುಖ್ಯ ಮತ್ರಿಗಳು ಇ–ಆಡಳಿತ, ಆರ್.ಡಿ.ಪಿ.ಆರ್, ಕಂದಾಯ ಇಲಾಖೆಗಳ ಅಧಿಕಾರಿಗಳು ಮತ್ತು ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಪತ್ರ ಮುಖೇನ ಸೂಚನೆಯನ್ನು ನೀಡಿದ್ದಾರೆ. ಆ ಮೂಲಕವಾಗಿ ಅವರು ರಾಜ್ಯದಲ್ಲಿ ಸರ್ಕಾರಿ ಸೇವೆಗಳು ಸ್ಥಳೀಯವಾಗಿ, ಸುಲಭವಾಗಿ ಮತ್ತು ಅಲ್ಪಸಮಯದಲ್ಲಿ ದೊರಕಿಸಿಕೊಡುವ ಮೂಲಕ ಸರ್ಕಾರದಲ್ಲಿ ಮಹತ್ತರ ಕ್ರಾಂತಿಯನ್ನು ಮಾಡುವಂತಹ ಹೆಜ್ಜೆ ಇರಿಸಿದ್ದಾರೆ.

ಮೊದಲ ಹಂತದಲ್ಲಿ ಬೀದರ್, ಕೊಪ್ಪಳ, ಬಳ್ಳಾರಿ, ಬೆಳಗಾವಿ, ಹಾವೇರಿ, ವಿಜಯಪುರ, ದಾವಣಗೆರೆ, ಶಿವಮೊಗ್ಗ, ತುಮಕೂರು, ಚಿಕ್ಕಮಗಳೂರು, ಉಡುಪಿ ಹಾಗೂ ಕೊಡಗು ಸೇರಿದಂತೆ 12 ಜಿಲ್ಲೆಗಳಲ್ಲಿ ಗ್ರಾಮ ಒನ್ ಕೇಂದ್ರಗಳಿಂದ ಸೇವೆಗಳನ್ನು ಪಡೆದುಕೊಳ್ಳುತ್ತಿದ್ದಾರೆ. ಇದಕ್ಕೂ ಮೊದಲು ಗ್ರಾಮೀಣ ಭಾಗದ ಜನರು ವಿವಿಧ ಇಲಾಖೆಗಳ ಸೇವಾ ಸೌಲಭ್ಯವನ್ನು ಪಡೆಯುವ ಸಲುವಾಗಿ ತಮ್ಮ ಕೆಲಸವನ್ನು ಬಿಟ್ಟು ತಾಲೂಕು, ಜಿಲ್ಲಾ ಕಛೇರಿಗಳಿಗೆ ಎರಡು ಮೂರು ಭಾರಿಯಾದರೂ ಅಲೆದಾಡಬೇಕಾಗಿತ್ತು, ಆದರೆ ಈಗ ವಿವಿಧ ಇಲಾಖೆಗಳ ಸೇವೆಗಳನ್ನು ಗ್ರಾಮ ಒನ್ ಕೇಂದ್ರಗಳಲ್ಲೆ ಪಡೆದುಕೊಳ್ಳುವಂತೆ ಸರ್ಕಾರವು ಅನುಕೂಲ ಒದಗಿಸಿರುವುದಕ್ಕೆ ಜನರು ಸಂತಸಗೊಂಡಿದ್ದಾರೆ, ಜಮೀನಿನ ಕೆಲಸ ಬಿಟ್ಟು ಪದೇ ಪದೇ ತಾಲೂಕು ಜಿಲ್ಲಾ, ಕಛೇರಿಗಳಿಗೆ ಅಲೆದಾಡಬಾಕಾಗಿತ್ತು, ಈ ಅಲೆದಾಟದಿಂದ ತಪ್ಪಿಸಿಕೊಳ್ಳಲು ಮಧ್ಯವರ್ತಿಗಳಿಗೆ ಹಣ ನೀಡಿ ನಮಗೆ ಬೇಕಾದ ಸೇವೆಯನ್ನು

ಪಡೆದುಕೊಳ್ಳುತ್ತಿದ್ದರು. ಆದರೆ ನಮಗೆ ಸ್ಥಳೀಯವಾಗಿ ಕನಿಷ್ಠ ಶುಲ್ಕ ಪಡೆದು ವಿವಿಧ ಇಲಾಖೆಗಳ ಸೇವೆಯನ್ನು ನೀಡಲು ಸರ್ಕಾರವೇ ಮುಂದಾಗಿರುವುದು ನಮಗೆ ಹೆಚ್ಚು ಅನುಕೂಲವಾಗಿದೆ ಎಂದು ಗ್ರಾಮೀಣ ಭಾಗದ ಜನರು ಅಭಿಪ್ರಾಯಪಡುತ್ತಿದ್ದಾರೆ. ಈ ಯೋಜನೆಯನ್ನು ಹೆಚ್ಚು ಜನಪ್ರಿಯ ಮತ್ತು ಜನಸ್ನೇಹಿಯಾಗಿಸುವ ನಿಟ್ಟಿನಲ್ಲಿ ಈ ಗ್ರಾಮ ಒನ್ ಆಪರೇಟರ್‌ಗಳಿಗೆ ಇ–ಆಡಳಿತ ಇಲಾಖೆಯಿಂದ ನೀತಿ ಸಂಹಿತೆ, ತಾಂತ್ರಿಕ ಆಡಳಿತಾತ್ಮಕ ಮತ್ತು ಕಾನೂನು ಸಮಸ್ಯೆಗಳ ಬಗ್ಗೆ ತರಬೇತಿ ನೀಡಲಾಗಿದೆ.

ತಂತ್ರಜ್ಞಾನ ಆಧಾರಿತ ಈ ಸೌಕರ್ಯದಿಂದಾಗಿ ಗ್ರಾಮೀಣ ಭಾಗದ ಜನರ ಹಣ, ಶ್ರಮ, ಮತ್ತು ಸಮಯ ಉಳಿತಾಯವಾಗಲಿದೆ. ಈ ಕೇಂದ್ರದಲ್ಲಿ ಅಂತರ್ಜಾಲ ಸಹಾಯದಿಂದ ಎಲೆಕ್ಟ್ರಾನಿಕ್ ರೂಪದಲ್ಲಿ ನೀಡಲಾಗುವ ಈ ಸೇವೆಗಳನ್ನು ಕನಿಷ್ಠ ಅರ್ಜಿ ಶುಲ್ಕವನ್ನು ಪಾವತಿಸಿ ಒದಗಿಸಲಾಗುವುದು, ಈ ಕೇಂದ್ರವು ಬೆಳಗ್ಗೆ 8 ರಿಂದ ಪ್ರಾರಂಭವಾಗಿ ರಾತ್ರಿ 8 ಗಂಟೆವರೆಗೂ ಕಾರ್ಯ ನಿರ್ವಹಿಸುವುದರಿಂದ ಕೃಷಿ ಕೆಲಸ ಮಾಡುವ ಗ್ರಾಮೀಣ ಭಾಗದ ಜನರಿಗೆ ಕೃಷಿ ಕೆಲಸಕ್ಕೆ ಹೊರಡುವುದಕ್ಕೆ ಮುಂಚಿತವಾಗಿ ಅಥವಾ ಕೃಷಿ ಕೆಲಸ ಮುಗಿಸಿಕೊಂಡು ಮನೆಗೆ ಮರಳಿದ ನಂತರ ರಾತ್ರಿ 8 ಗಂಟಯ ಒಳಗೆ ತಮಗೆ ಬೇಕಾದ ಸೇವೆಯನ್ನು ಗ್ರಾಮ ಒನ್ ನಿಂದ ಪಡೆಯಲು ಅನುಕೂಲವಾಗಿದೆ. ಸರ್ಕಾರವು ಗ್ರಾಮೀಣ ಭಾಗದ ಕಾರ್ಯ ಚಟುವಟಿಕೆಗೆ ಅನುಗುಣವಾಗಿಯೇ ಕೇಂದ್ರದ ಕಾರ್ಯ ಚಟುವಟಿಕೆಯ ಸಮಯವನ್ನು ನಿಗಧಿಪಡಿಸಿದೆ.

ಅಧಿಕಾರಿಗಳು ಖುದ್ದಾಗಿ ಪರಿಶೀಲಿಸಿ ನೀಡಬೇಕಾಗಿ ಸೇವೆಗಳನ್ನು ಹೊರತುಪಡಿಸಿ ಕಾಗದ ಪತ್ರದಲ್ಲಿ ನಡೆಯಬಹುದಾದ ಬಹುತೇಕ ಅರ್ಜಿಗಳು ಇನ್ನೂ ಮುಂದೆ ಗ್ರಾಮ ಒನ್ ಮೂಲಕವೇ ವಿಲೇವಾರಿಯಾಗಲಿವೆ, ಸೇವಾ ಸಿಂಧು ಕಾರ್ಯಕ್ರಮದ ಎಲ್ಲಾ 750 ಸೇವೆಗಳು, ಸಕಾಲ ಸೇವೆಗಳು, ಆರ್‌ಟಿಐ ಸೇವಗಳು, ಸಿ.ಎಮ್.ಆರ್.ಎಫ್ ಸೇವೆಗಳು ಹಾಗೂ ಮೈಕ್ರೋ ಬ್ಯಾಂಕಿಂಗ್ ಸೇವೆಗಳು ಆಧಾರ್ ತಿದ್ದುಪಡಿ ಇತ್ಯಾದಿ ಸೇವಗಳನ್ನು ಈ ಗ್ರಾಂ ಒನ್ ಕೇಂದ್ರಗಳಲ್ಲಿ ಒದಗಿಸಲಾಗುತ್ತಿದೆ. ಇದಲ್ಲದೆ ಜಮೀನಿನ ದಾಖಲೆ ಪಡೆಯಬೇಕಿದ್ದರೆ ಕಂದಾಯ ಇಲಾಖೆ ತೆರಿಗೆ ಪಾವತಿಸಬೇಕಿದ್ದರೆ, ಪಿಂಚಣಿ ಮಾಶಾಸನಕ್ಕೆ ಅರ್ಜಿ, ಶಿಕ್ಷಣ ಇಲಾಖೆಯಿಂದ ಮರು ಮೌಲ್ಯಮಾಪನ, ಸಾರಿಗೆ, ಕೃಷಿ, ತೋಟಗಾರಿಕೆ, ಕಂದಾಯ, ಆಹಾರ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಗಳ ವಿವಿಧ ಸೇವೆಗಳು ಸರ್ಕಾರದಿಂದ ಸಹಾಯಧನಕ್ಕೆ ಅರ್ಜಿ ಇವೇ ಮುಂತಾದ ಸೇವೆಗಳನ್ನು ಪಡೆಯಲು ಅರ್ಜಿ ಸಲ್ಲಿಸಿದ ನಂತರ ಅದರ ಸ್ಥಿತಿಗತಿಗಳ ಬಗ್ಗೆ ಮೊಬೈಲ್ ಸಂದೇಶದ ಮೂಲಕ ಮಾಹಿತಿ ನೀಡಲಾಗುತ್ತಿದೆ. ಗ್ರಾಮಪಂಚಾಯಿತಿ ವ್ಯಾಪ್ತಿಗೆ ಮೀರಿದ ಬೇರೆ ಬೇರೆ ಇಲಾಖೆ ಸೇವೆಗಳನ್ನು ಮಾತ್ರವೇ ಗ್ರಾಮ ಒನ್ ಕೇಂದ್ರಗಳಲ್ಲಿ ನೀಡಲಾಗುತ್ತದೆ.

**ಗ್ರಾಮ ಒನ್ ಅನುಷ್ಠಾನಕ್ಕಾಗಿ ತೆಗೆದುಕೊಂಡ ಕ್ರಮಗಳು**

- ಮುಖ್ಯಮಂತ್ರಿಯವರ ಕನಸಿನ ಈ ಯೋಜನೆಯನ್ನು ಪಾರದರ್ಶಕವಾಗಿ ಕಾರ್ಯ ನಿರ್ವಹಿಸುವಂತೆ ಮಾಡುವ ಉದ್ದೇಶದಿಂದ ಇ ಆಡಳಿತ ಇಲಾಖೆಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಕನಿಷ್ಠ ಮುಂದಿನ ಎರಡು ತಿಂಗಳವರೆಗೆ ಪ್ರತಿವಾರ ಸಭೆಯನ್ನು ಆಯೋಜಿಸಿ ಪ್ರಗತಿ ಪರಿಶಿಲನೆ ನಡೆಸಬೇಕು.
- ಎಲ್ಲಾ ಗ್ರಾಮ ಒನ್ ಆಪರೇಟರ್‌ಗಳಿಗೆ ಅನ್ವಯಿಸುವಂತೆ ಇ–ಆಡಳಿತ ಇಲಾಖೆಯಿಂದ ನೀತಿ ಸಂಹಿತೆ ಪ್ರಕಟಿಸಲಾಗಿದ್ದು, ನೀತಿ ಸಂಹಿತೆ ಪಾಲನೆಯನ್ನು ಜಿಲ್ಲಾಧಿಕಾರಿಗಳು ಖಚಿತಪಡಿಸಿಕೊಳ್ಳುತ್ತಾರೆ.

- ಗ್ರಾಮ ಒನ್ ಆಪರೇಟರ್‌ಗಳಿಗೆ ತಾಂತ್ರಿಕ, ಆಡಳಿತಾತ್ಮಕ ಮತ್ತು ಕಾನೂನು ಸಮಸ್ಯೆಗಳನ್ನು ಕುರಿತಂತೆ ಕಾಲ ಕಾಲಕ್ಕೆ ತರಬೇತಿಯನ್ನು ನೀಡುವ ಮೂಲಕ ಅವರ ಪ್ರಾವಿಣ್ಯತೆಯನ್ನು ಪರೀಕ್ಷಿಸಲಾಗುತ್ತದೆ.
- ಗ್ರಾಮ ಒನ್ ನಿಂದ ಸ್ವೀಕರಿಸಿದ ಅರ್ಜಿಗಳ ಶೀಘ್ರ ವಿಲೇವಾರಿ ಅರ್ಜಿಗಳ ತಿರಸ್ಕಾರಕ್ಕೆ ಕಾರಣಗಳನ್ನು ಎಲ್ಲಾ ಇಲಾಖೆಗಳ ಡ್ರಾಪ್‌ಡೌನ್‌ನಲ್ಲಿ ಸ್ಪಷ್ಟವಾಗಿ ಉಲ್ಲೇಖಿಸಬೇಕು.
- ಜಿಲ್ಲಾ ಮಟ್ಟದಲ್ಲಿ ವಾರಕ್ಕೆ ಒಮ್ಮೆ ಜಿಲ್ಲಾಧಿಕಾರಿಗಳು ತಹಶೀಲ್ದಾರರು ಮತ್ತು ಗ್ರಾಮ ಒನ್ ಆಪರೇಟರ್‌ಗಳೊಂದಿಗೆ ಪರಿಶೀಲನಾ ಸಭೆಯನ್ನು ನಡೆಸಬೇಕು.

**ಗ್ರಾಮ ಒನ್ ಯೋಜನೆಯ ಪ್ರಾಕಲ್ಪನೆಗಳು**

- ಗ್ರಾಮ ಒನ್ ಯೋಜನೆಯ ಸೇವೆಯಿಂದಾಗಿ ಗ್ರಾಮದ ಎಲ್ಲಾ ಜನರಿಗೂ ಅನುಕೂಲವಾಗಿದೆ.
- ಈ ಗ್ರಾಮ ಒನ್ ಯೋಜನೆಯ ಸೇವೆಯ ಫಲವಾಗಿ ರಾಜ್ಯ ಸರ್ಕಾರವು ಆಡಳಿತದಲ್ಲಿ ಕ್ರಾಂತಿಕಾರಿ ಬದಲಾವಣೆಯನ್ನು ತರುವ ಉದ್ದೇಶ ಹೊಂದಿದೆ.
- ಗ್ರಾಮ ಒನ್ ಯೋಜನೆಯ ಸೇವೆಯಿಂದಾಗಿ ತಾಲ್ಲೂಕು, ಹೋಬಳಿ, ಜಿಲ್ಲಾ ಕಛೇರಿಗಳಿಗೆ ಅಲೆದಾಡುವುದನ್ನು ತಪ್ಪಿಸಿದಂತಾಗಿದೆ. ಇದರಿಂದಾಗಿ ಸಮಯ ಶ್ರಮ ಮತ್ತು ಹಣ ಉಳಿತಾಯವಾಗಲಿದೆ.

**ಗ್ರಾಮ ಒನ್ ಯೋಜನೆಯ ಉದ್ದೇಶಗಳು**

- ಗ್ರಾಮ ಒನ್ ಯೋಜನೆಯ ಸೇವೆಯ ಫಲವಾಗಿ ವಿವಿಧ ಇಲಾಖೆಗಳ ಸೇವೆಗಳನ್ನು ಒಂದೇ ಕೇಂದ್ರದಲ್ಲಿ ಪಡೆಯಬಹುದಾಗಿದೆ.
- ಗ್ರಾಮ ಮಟ್ಟದಲ್ಲಿ ಉದ್ಯೋಗ ಅವಕಾಶಗಳು ಸೃಷ್ಟಿಯಾಗುತ್ತವೆ.
- ಸರ್ಕಾರದ ಸೇವೆಗಳನ್ನು ಪಡೆಯಲು ನಾಗರಿಕರು ಯಾರನ್ನು ಅವಲಂಬಿಸಬೇಕಾಗಿಲ್ಲವಾದ್ದರಿಂದ ಸ್ವಾವಲಂಬನಾ ಮನೋಭಾವವನ್ನು ಎತ್ತಿಹಿಡಿದಂತಾಗಿದೆ.
- ಗ್ರಾಮ ಒನ್ ಯೋಜನೆಯ ಸೇವೆಗಳ ಸಮಯೋಚಿತ ಮತ್ತು ಗುಣಮಟ್ಟದ ವಿತರಣೆ ಮೂಲಕ ಸಮಾಜಿಕ ಆರ್ಥಿಕ ಅಭಿವೃದ್ಧಿಯನ್ನು ಸಾಧಿಸಲಾಗುತ್ತದೆ.

ಈ ಯೋಜನೆ ಅನುಷ್ಠಾನಗೊಂಡ ಎರಡು ವಾರಗಳಲ್ಲೆ ಸ್ವತಃ ಮುಖ್ಯ ಮಂತ್ರಿಗಳೇ ಜಿಲ್ಲಾಧಿಕಾರಿಗಳು ಮತ್ತು ಗ್ರಾಮ ಒನ್ ಆಪರೇಟರ್‌ಗಳೊಂದಿಗೆ ಸಂವಾದ ನಡೆಸಿ, ಆಪರೇಟರ್‌ಗಳ ಅನುಭವ, ಅವರ ಕಾರ್ಯ ನಿರ್ವಹಣೆಯಲ್ಲಿ ಎದುರಾಗುವ ತೊಡಕುಗಳು ಇವೇ ಮುಂತಾದ ಮಾಹಿತಿಯನ್ನು ಮಾನ್ಯ ಮುಖ್ಯಮಂತ್ರಿಗಳು ಪಡೆದುಕೊಂಡರು. ಈ ಸಂದರ್ಭದಲ್ಲಿ ನಿರುದ್ಯೋಗಿಯಾಗಿದ್ದ ಅದೇ ಗ್ರಾಮದ ಯುವಕರು ತಮ್ಮ ಸ್ವಂತ ಊರಿನಲ್ಲಿ ಗ್ರಾಮ ಒನ್ ಆಪರೇಟರ್ ಆಗಿ ಕಾರ್ಯ ನಿರ್ವಹಿಸಲು ಅವಕಾಶ ದೊರಕಿರುವುದಕ್ಕೆ ಸಂತಸವಾಗಿದೆ ಎಂದು ಮುಖ್ಯ ಮಂತ್ರಿಯವರೊಂದಿಗೆ ಹರುಷ ವ್ಯಕ್ತಪಡಿಸಿದರು. ರಾಜ್ಯ ಸರ್ಕಾರವು ಆಡಳಿತದಲ್ಲೇ ಕ್ರಾಂತಿಕಾರಿ ಬದಲಾವಣೆಯನ್ನು ತರುವ ಉದ್ದೇಶ ಹೊಂದಿರುವುದರಿಂದಲೇ ಜನರ ಬಳಿಗೆ ಸರ್ಕಾರವನ್ನು ಕೊಂಡೊಯ್ಯುವಂತಹ ಈ ಮಹತ್ವಕಾಂಕ್ಷಿ ಗ್ರಾಮ ಒನ್ ಯೋಜನೆಯನ್ನು ಜಾರಿಗೊಳಿಸಿದೆ. ಒಟ್ಟಿನಲ್ಲಿ ಈ ಯೋಜನೆಯಿಂದ ಗ್ರಾಮೀಣ ಜನರ ಹಣ, ಶ್ರಮ, ಸಮಯ ಉಳಿಯುವುದರ ಜೊತೆಗೆ ಸರ್ಕಾರದ ಆಡಳಿತದಲ್ಲಿ ದಕ್ಷತೆ ಹಾಗೂ ಪಾರದರ್ಶಕತೆ ಹೆಚ್ಚಲ್ಲಿದೆ.

ಕರ್ನಾಟಕದಲ್ಲಿ ಗ್ರಾಮ ಒನ್ ಸೇವೆಯನ್ನು 211 ಕೇಂದ್ರಗಳಲ್ಲಿ ಒದಗಿಸಲಾಗಿದೆ. ಗ್ರಾಮ ಒನ್

ಕರ್ನಾಟಕ ಸರ್ಕಾರದ ಮಹತ್ವಕಾಂಕ್ಷಿ ಯೋಜನೆಯಾಗಿದ್ದು, ಎಲ್ಲಾ ಇಲಾಖೆಗಳ ನಾಗರಿಕ ಸೇವೆಗಳನ್ನು ಗ್ರಾಮೀಣ ನಾಗರಿಕರಿಗೆ ಅವರ ಗ್ರಾಮಗಳಲ್ಲಿಯೇ ತಲುಪಿಸುವ ಗುರಿಯನ್ನು ಹೊಂದಿದೆ. ಈ ಯೋಜನೆಯನ್ನು ಕೇಂದ್ರಿತ ಸೇವೆಗಳಾದ ಜಿ–2ಸಿ ಬ್ಯಾಂಕಿಗ್ ಸೇವೆಗಳು ಆರ್.ಟಿ.ಐ ಪ್ರಶ್ನೆಗಳು ಹಾಗೂ ಇನ್ನಿತರ ಸೇವೆಗಳನ್ನು ಗ್ರಾಮ ಮಟ್ಟದಲ್ಲಿ ಎಲ್ಲಾ ನಾಗರಿಕರಿಗೆ ತಲುಪಿಸುವ ಏಕ–ಬಿಂಧು ಸಹಾಯ ಕೇಂದ್ರವಾಗಿರುವಂತೆ ಯೋಜಿಸಲಾಗಿದೆ. ಕರ್ನಾಟಕದ ಮಾನ್ಯ ಮುಖ್ಯ ಮಂತ್ರಿಗಳು ಈ ಯೋಜನೆಯನ್ನು ವರ್ಷ 2020–21ರ ಬಜೆಟ್‌ನಲ್ಲಿ ಘೋಷಿಸಿದ್ದಾರೆ.

**ಗ್ರಾಮ ಒನ್ ಕೇಂದ್ರಗಳ ಪ್ರಯೋಜನಗಳು ಈ ಕೆಳಕಂಡಂತಿವೆ.**

- ಸರ್ಕಾರಿ ಸೇವೆಗಳನ್ನು ಪಡೆಯಲು ನಾಗರಿಕರು ಜಿಲ್ಲೆ, ತಾಲೂಕು, ಮತ್ತು ಹೋಬಳಿ ಕಚೇರಿಗಳಿಗೆ ಬೇಟಿ ನೀಡುವ ಅಗತ್ಯವಿಲ್ಲ.
- ವಿವಿಧ ಇಲಾಖೆಗಳ ಸೇವೆಗಳನ್ನು ಒಂದೇ ಕೇಂದ್ರದಲ್ಲಿ ಪಡೆಯಬಹುದಾಗಿದೆ.
- ಗ್ರಾಮ ಒನ್ ಕೇಂದ್ರಗಳ ಮೂಲಕ ಸೇವೆಗಳನ್ನು ಪಡೆಯುವ ಮೂಲಕ ನಾಗರಿಕರು ಸಮಯ ಮತ್ತು ಹಣವನ್ನು ಉಳಿಸಬಹುದು.
- ಮಧ್ಯವರ್ತಿಗಳಿಂದ ಯಾವುದೇ ಅಪಾಯವಿಲ್ಲ.
- ಗ್ರಾಮ ಮಟ್ಟದಲ್ಲಿ ಉದ್ಯೋಗ ಅವಕಾಶಗಳು ಸೃಷ್ಟಿಯಾಗುತ್ತವೆ.
- ಪ್ರತಿ ಗ್ರಾಮ ಒನ್ ಕೇಂದ್ರವು ಮೈಕ್ರೋ ಬ್ಯಾಂಕಿಂಗ್ ಸಂಸ್ಥೆಯಾಗಿ ಕಾರ್ಯ ನಿರ್ವಹಿಸಲು ಅವಕಾಶ ನೀಡುವ ಮೂಲಕ ಆರ್ಥಿಕ ಸೇರ್ಪಡೆಯನ್ನು ಸಾಧಿಸಲಾಗುತ್ತದೆ.
- ಸರ್ಕಾರದ ಸೇವೆಗಳನ್ನು ಪಡೆಯಲು ನಾಗರಿಕರು ಯಾರನ್ನು ಅವಲಂಬಿಸಬೇಕಾಗಿಲ್ಲವಾದ್ದರಿಂದ ಸ್ವಾಲಂಬನಾ ಮನೋಭಾವವನ್ನು ಎತ್ತಿ ಹಿಡಿದಂತಾಗಿದೆ.
- ಸೇವೆಗಳ ಸಮಯೋಚಿತ ಮತ್ತು ಗುಣ ಮಟ್ಟದ ವಿತರಣೆ ಸಮಾಜಿಕ, ಆರ್ಥಿಕ ಅಭಿವೃದ್ದಿಯನ್ನು ಸಾಧಿಸಲಾಗುತ್ತದೆ.

ಒಟ್ಟಾರೆಯಾಗಿ ಗ್ರಾಮ ಒನ್ ಯೋಜನೆಯು ಗ್ರಾಮೀಣ ಪ್ರದೇಶದ ಜನರಿಗೆ ಸರ್ಕಾರಿ ಸೇವೆಗಳನ್ನು ಒಂದೇ ಕೇಂದ್ರದಲ್ಲಿ ಸುಲಭವಾಗಿ, ತ್ವರಿತವಾಗಿ ಮತ್ತು ಪಾರದರ್ಶಕವಾಗಿ ಒದಗಿಸುವ ಮಹತ್ವದ ಡಿಜಿಟಲ್ ಆಡಳಿತದ ಉಪಕ್ರಮವಾಗಿದೆ. ಈ ಯೋಜನೆಯಿಂದ ಸಾರ್ವಜನಿಕ ಸೇವೆಗಳ ಲಭ್ಯತೆ ಹೆಚ್ಚುವುದರ ಜೊತೆಗೆ, ಸಮಯ ಮತ್ತು ವೆಚ್ಚದ ಉಳಿತಾಯವಾಗಿದ್ದು, ಗ್ರಾಮೀಣ ನಾಗರಿಕರ ಆಡಳಿತಾತ್ಮಕ ಸೇವೆಗಳ ಮೇಲಿನ ವಿಶ್ವಾಸವೂ ವೃದ್ಧಿಯಾಗಿದೆ. ವಿವಿಧ ಇಲಾಖೆಗಳ ಸೇವೆಗಳನ್ನು ಏಕೀಕೃತ ವೇದಿಕೆಯಲ್ಲಿ ಒದಗಿಸುವ ಮೂಲಕ ಸರ್ಕಾರ ಮತ್ತು ನಾಗರಿಕರ ನಡುವಿನ ಅಂತರವನ್ನು ಕಡಿಮೆ ಮಾಡುವಲ್ಲಿ ಗ್ರಾಮ ಒನ್ ಯೋಜನೆಯು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸುತ್ತಿದೆ.

ಆದಾಗ್ಯೂ, ಡಿಜಿಟಲ್ ಸಾಕ್ಷರತೆಯ ಕೊರತೆ, ತಾಂತ್ರಿಕ ಸಮಸ್ಯೆಗಳು, ಇಂಟರ್ನೆಟ್ ಸಂಪರ್ಕದ ಅಸಮರ್ಪಕತೆ ಹಾಗೂ ಸಾರ್ವಜನಿಕರಲ್ಲಿ ಅರಿವಿನ ಅಭಾವದಂತಹ ಸವಾಲುಗಳನ್ನು ನಿವಾರಿಸುವ ಅಗತ್ಯವಿದೆ. ಈ ನಿಟ್ಟಿನಲ್ಲಿ ಮೂಲಸೌಕರ್ಯವನ್ನು ಮತ್ತಷ್ಟು ಬಲಪಡಿಸುವುದು, ಸಿಬ್ಬಂದಿಗೆ ನಿರಂತರ ತರಬೇತಿ ನೀಡುವುದು, ಜನಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು ಹಾಗೂ ಸೇವೆಗಳ ಗುಣಮಟ್ಟವನ್ನು ಸುಧಾರಿಸುವುದು ಅತ್ಯಗತ್ಯವಾಗಿದೆ. ಈ ಕ್ರಮಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಿದರೆ, ಗ್ರಾಮ ಒನ್ ಯೋಜನೆಯು ಗ್ರಾಮೀಣ ಅಭಿವೃದ್ಧಿ ಮತ್ತು ಡಿಜಿಟಲ್ ಭಾರತದ ಪರಿಕಲ್ಪನೆಯನ್ನು ಸಾಕಾರಗೊಳಿಸುವಲ್ಲಿ ಇನ್ನಷ್ಟು ಮಹತ್ವದ ಪಾತ್ರವನ್ನು ವಹಿಸಲಿದೆ.

## ಪರಾಮರ್ಶನ ಗ್ರಂಥಗಳು


- ಪಾಟೀಲ್, ಎಂ.ಬಿ. (1998). *ಕರ್ನಾಟಕ ವಿಕಾಸ*. ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
- ರಮೇಶ್, ಓ. (2013). *ಗ್ರಾಮೀಣಾಭಿವೃದ್ಧಿಯ ಕಾರ್ಯಕ್ರಮಗಳು*. ಸಾಹಿತ್ಯ ನಂದನ
- Bhatnagar, S. C. (2004). *E-government: From vision to implementation—A practical guide with case studies*. SAGE Publications.
- Government of India. (2022). *Digital India Programme*. Ministry of Electronics and Information Technology. https://www.digitalindia.gov.in
- Government of India. (2023). *National e-Governance Plan (NeGP)*. Ministry of Electronics and Information Technology. https://www.meity.gov.in
- Government of Karnataka. (2021). *e-Governance Department: Annual Report 2020–21*. Department of e-Governance, Government of Karnataka.
- Government of Karnataka. (2022). *Grama One: Citizen service centres*. Department of e-Governance, Government of Karnataka. https://www.gramaone.karnataka.gov.in
- Heeks, R. (2006). *Implementing and managing eGovernment: An international text*. SAGE Publications.
- Misra, D. C. (Ed.). (2007). *E-Governance: From vision to implementation*. Academic Foundation.
- Planning Department, Government of Karnataka. (2023). *Karnataka Economic Survey 2022–23*. Government of Karnataka.
- United Nations. (2022). *United Nations E-Government Survey 2022: The future of digital government*. United Nations Department of Economic and Social Affairs. https://publicadministration.un.org/egovkb
- World Bank. (2016). *World Development Report 2016: Digital dividends*. World Bank. https://www.worldbank.org